# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 949(1029) |
| ಸದಸ್ಯರ ಹೆಸರು | : ಶ್ರೀ ಪ್ರತಾಪ್ ಸಿಂಹನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 25.07.2024 |
| ಉತ್ತರಿಸುವ ಸಚಿವರು | : ಮಾನ್ಯಮುಖ್ಯಮಂತ್ರಿಯವರು |

| ಪ್ರಶ್ನೆ | ಉತ್ತರ |
|---|---|
| **ಅ)ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ನಿವೃತ್ತ ಅಧಿಕಾರಿಗಳು ಹಾಗೂ ನೌಕರರನ್ನು ನೇಮಕ ಮಾಡಿಕೊಳ್ಳುತ್ತಿರುವುದರಿಂದ ಆಡಳಿತ ಸುಧಾರಣೆ ಮೇಲೆ ಋಣಾತ್ಮಕ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;** | ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 137 ಈಕಾಅ 2005 ದಿನಾಂಕ:26.07.2005ರನ್ವಯ ವಾಹನಚಾಲಕರು ಹಾಗೂ 'ಡಿ' ವೃಂದಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳು ಹಾಗೂ ಇನ್ನೂ ಮುಂದೆ ಖಾಲಿಯಾಗುವ ಹುದ್ದೆಗಳನ್ನು ಬಾಹ್ಯ ಮೂಲಗಳ ಮುಖಾಂತರ ಪೂರೈಸಬೇಕೆಂದು ಸೂಚಿಸಲಾಗಿದೆ. ಅದರಂತೆ, ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 06 ಸನೆನಿ 2024 ದಿನಾಂಕ: 20.05.2024ರಲ್ಲಿ ರಾಜ್ಯ ಸರ್ಕಾರದ ಹೊರಗುತ್ತಿಗೆ ನೇಮಕಾತಿಯಲ್ಲಿ ಕೆಲವು ಸೂಚನೆಗಳೊಂದಿಗೆ ಪ್ರಸ್ತುತ ಜಾರಿಯಲ್ಲಿರುವ ಮೀಸಲಾತಿ ನಿಯಮವನ್ನು ಅಳವಡಿಸಿಕೊಂಡು ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಲಾಗಿದೆ.<br><br>ಮುಂದುವರೆದು ದಿನಾಂಕ: 03.04.2025ರ ಸುತ್ತೋಲೆ ಸಂಖ್ಯೆ: ಸಿಆಸುಇ 06 ಸನೆನಿ 2024ರಲ್ಲಿ, ದಿನಾಂಕ: 20.05.2024ರ ಸುತ್ತೋಲೆಯ ಕಂಡಿಕೆ 6ಕ್ಕೆ ತಿದ್ದುಪಡಿ ಮಾಡಿ ಯಾವುದೇ ಇಲಾಖೆಯಲ್ಲಿ ಕನಿಷ್ಠ 20 ಅಭ್ಯರ್ಥಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುವ ಸಂದರ್ಭದಲ್ಲಿ ಮಾತ್ರ ಮೀಸಲಾತಿ ನೀತಿಯನ್ನು ಜಾರಿಗೊಳಿಸತಕ್ಕದ್ದು ಎಂಬುದರ ಬದಲಾಗಿ, ಈ ಕೆಳಕಂಡಂತೆ ಸೂಚನೆಗಳನ್ನು ನೀಡಲಾಗಿದೆ:-<br><br>"ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುವ ಸಂದರ್ಭದಲ್ಲಿ, ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ಅಧಿನಿಯಮ, 2024ರ ಸೆಕ್ಷನ್ 4ರ ಸಬ್ ಸೆಕ್ಷನ್ "(5) ರಾಜ್ಯ ಸಿವಿಲ್ ಸೇವೆಗಳ ವೃಂದದಲ್ಲಿನ ಅಥವಾ ಸರ್ಕಾರಿ ವಲಯದ ಸಂಸ್ಥೆಗಳಲ್ಲಿನ ಯಾವುದೇ ಹುದ್ದೆಗೆ ನೇರ ನೇಮಕಾತಿ ಕೋಟಾದ ಎದುರು ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡುವಾಗ, ಸರ್ಕಾರದಿಂದ ಮಾನ್ಯತೆ ಪಡೆದ ಮಾನವಶಕ್ತಿ ಪೂರೈಕೆ ಏಜೆನ್ಸಿಯು, ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ ಸದಸ್ಯರಿಗೆ ನಿಯಮಿಸಬಹುದಾದ ಅಂಥ ವ್ಯಾಪ್ತಿ ಮತ್ತು ವಿಧಾನದಲ್ಲಿ ಸಾಕಷ್ಟು ಪ್ರಾತಿನಿಧ್ಯ ನೀಡಲಾಗಿದೆ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು:<br><br>ಪರಂತು, ಹೊರಗುತ್ತಿಗೆ ಆಧಾರದ ಮೇಲಿನ ನೇಮಕಾತಿಯು ತಾತ್ಕಾಲಿಕ ಆಧಾರದಲ್ಲಿರತಕ್ಕದ್ದು ಮತ್ತು ಅದನ್ನು ನೇರ |

| | |
|---|---|
| **ಆಗಬಂದಿದ್ದಲ್ಲಿ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಈ ಕುರಿತು ಹೊಂದಿರುವ ನಿಯಮ ಮತ್ತು ಮಾನದಂಡಗಳೇನು:** | ನೇಮಕಾತಿ ಕೋಟಾದ ಎದುರು ಕ್ರಮಬದ್ಧಗೊಳಿಸತಕ್ಕದ್ದಲ್ಲ: ಮತ್ತು ಪರಂತು, ಹೊರಗುತ್ತಿಗೆ ಆಧಾರದ ಮೇಲಿನ ನೇಮಕಾತಿಯು ನೇರ ನೇಮಕಾತಿ ಎದುರಾಗಿ ಮಂಜೂರಾದ ಹುದ್ದೆಗಳ ಶೇಕಡಾ ಹತ್ತರಷ್ಟನ್ನು ಮೀರತಕ್ಕದ್ದಲ್ಲ:<br><br>ಅಲ್ಲದೆ ಪರಂತು, ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿಗಳ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ಅಧಿನಿಯಮ, 2024ರ ಪ್ರಾರಂಭದ ದಿನಾಂಕದಂದು ಅಥವಾ ಅದಕ್ಕೆ ಮೊದಲು ಹೊರಗುತ್ತಿಗೆ ಆಧಾರದ ಮೇಲಿನ ನೇಮಕಾತಿಯು ಮಂಜೂರಾದ ಹುದ್ದೆಗಳ ಸಂಖ್ಯಾಬಲದ ಶೇಕಡಾ ಹತ್ತರಷ್ಟು ಮೀರಿದ್ದರೆ, ಆಗ ಅಂಥ ನೇಮಕಾತಿಗಳನ್ನು ಪ್ರತಿ ವರ್ಷ ಶೇಕಡಾ ಹತ್ತರಷ್ಟು ಕಡಿಮೆಗೊಳಿಸತಕ್ಕದ್ದು. |
| **ಇ) ಪ್ರಸ್ತುತ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ಅಧಿಕಾರಿಗಳು ಹಾಗೂ ನೌಕರರ ಸಂಖ್ಯೆ ಎಷ್ಟು:** | ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 15ರನ್ವಯ ಸರ್ಕಾರದ ಇಲಾಖೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗುತ್ತದೆ. ಸದರಿ ನಿಯಮಗಳ ನಿಯಮ 15(1)(ಎ)ರನ್ವಯ ಸರ್ಕಾರದ, ಕೇಂದ್ರ ಸರ್ಕಾರ ಅಥವಾ ಯಾವುದೇ ಇತರ ರಾಜ್ಯ ಸರ್ಕಾರದ ಸೇವೆಯಿಂದ ನಿವೃತ್ತನಾಗಿರುವ ಯಾರೇ ವ್ಯಕ್ತಿಯನ್ನು ಅವಶ್ಯಕವಾಗಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಮತ್ತು ಅಂಥ ಅವಧಿಯವರೆಗೆ ಮತ್ತು ಸಮಾಲೋಚನೆಯು ಅವಶ್ಯವಿರುವಲ್ಲಿ ಆಯೋಗದೊಂದಿಗೆ ಸಮಾಲೋಚನೆ ಮಾಡಿದ ನಂತರ ಸೇವೆಗೆ ಅಥವಾ ಹುದ್ದೆಗೆ ನೇಮಕ ಮಾಡಬಹುದಾಗಿದೆ.<br><br>ಮೇಲ್ಕಂಡ ನಿಯಮಗಳ ನಿಯಮ 15(1)(ಬಿ) ರನ್ವಯ ಒಪ್ಪಂದದ ಮೂಲಕ ನಿರ್ಧರಿಸಬಹುದಾದ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಅಂಥ ಹುದ್ದೆಯ ಕರ್ತವ್ಯಗಳನ್ನು ನಿರ್ವಹಿಸಲು ಸಮರ್ಥನಾಗಿರುವನೆಂದು ಅದು ಅಭಿಪ್ರಾಯಪಡುವ ಯಾರೇ ವ್ಯಕ್ತಿಯನ್ನು ಸೂಕ್ತ ಅಭ್ಯರ್ಥಿಗಳು ಲಭ್ಯವಿಲ್ಲವಾದಾಗ, ಇಲಾಖಾ ಮುಖ್ಯಸ್ಥರ ಹುದ್ದೆಗೆ, ತಾಂತ್ರಿಕ ಅರ್ಹತೆಯು ಅಗತ್ಯವಿರುವ ಹುದ್ದೆಗಳಿಗೆ ಹಾಗೂ ಸಚಿವರ, ರಾಜ್ಯ ಸಚಿವರ ಅಥವಾ ಉಪಸಚಿವರ ಆಪ್ತ ಸಿಬ್ಬಂದಿ ಶಾಖೆಯಲ್ಲಿನ ಹುದ್ದೆಗಳಿಗೆ ನೇಮಕ ಮಾಡಲು ಆಸ್ಪದ ಕಲ್ಪಿಸಲಾಗಿದೆ. ನಿಯಮ 15(2)ರಲ್ಲಿ ತಿಳಿಸಿರುವಂತೆ 15(1)(ಬಿ)ರ ಅಡಿಯಲ್ಲಿನ ಯಾರೇ ವ್ಯಕ್ತಿಯ ನೇಮಕದ ಒಟ್ಟು ಅವಧಿ ಅಥವಾ ಯಾವುದೇ ಹುದ್ದೆಯಲ್ಲಿ ನೇಮಕದ ಒಟ್ಟು ಅವಧಿ ಐದು ವರ್ಷಗಳನ್ನು ಮೀರತಕ್ಕದ್ದಲ್ಲ ಎಂದು ತಿಳಿಸಲಾಗಿದೆ.<br><br>ದಿನಾಂಕ:23.12.1994 ರ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 15 ಎಸ್‌ಡಿಇ 94 ರನ್ವಯ ಮತ್ತು ದಿನಾಂಕ:29.02.2016ರ ಸುತ್ತೋಲೆ ಸಂಖ್ಯೆ: ಸಿಆಸುಇ 588 ಸೇನೆನಿ 2015 ರನ್ವಯ ನಿವೃತ್ತಿ ಹೊಂದಿದ ನೌಕರರನ್ನು ಪುನರ್‌ನೇಮಕ ಮಾಡುವಂತಿಲ್ಲ. ಇದು ಸರ್ಕಾರದ |

| | |
|---|---|
| **ಈ) ಯಾವ ಕಾಲಮಿತಿಯೊಳಗೆ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ಅಧಿಕಾರಿಗಳೂ ಹಾಗೂ ನೌಕರರನ್ನು ಬಿಡುಗಡೆಗೊಳಿಸಲಾಗುವುದು?** | ನೀತಿಯಾಗಿರುತ್ತದೆ. ದಿನಾಂಕ:02.03.2016ರ ಸಮಸಂಖ್ಯೆಯ ಸುತ್ತೋಲೆಯಲ್ಲಿ ಕರ್ನಾಟಕ ಸರ್ಕಾರ (ವ್ಯವಹಾರ ನಿರ್ವಹಣೆ) ನಿಯಮಗಳು, 1977ರನ್ವಯ ಸಚಿವ ಸಂಪುಟದ ಅನುಮೋದನೆ ಪಡೆದು ಪುನರ್‌ನೇಮಕಗೊಂಡ ನೌಕರರ/ಅಧಿಕಾರಿಗಳ ಪ್ರಕರಣಗಳಿಗೆ ಅನ್ವಯಿಸುವುದಿಲ್ಲ ಎಂಬುದಾಗಿ ಸ್ಪಷ್ಟಪಡಿಸಿದೆ.<br><br>ಮಾನ್ಯ ಮುಖ್ಯಮಂತ್ರಿಯವರ ಸಚಿವಾಲಯ, ಮಾನ್ಯ ಉಪಮುಖ್ಯಮಂತ್ರಿಯವರ ಕಛೇರಿ, ಮಾನ್ಯ ಸಚಿವರುಗಳ ಕಛೇರಿ, ನಿಗಮ/ಮಂಡಳಿಗಳ ಅಧ್ಯಕ್ಷರುಗಳ ಕಛೇರಿ ಹಾಗೂ ಮಾನ್ಯ ಮುಖ್ಯಮಂತ್ರಿಗಳ ರಾಜಕೀಯ/ಆರ್ಥಿಕ ಸಲಹೆಗಾರರು, ದೆಹಲಿ ಪ್ರತಿನಿಧಿ, ಮಾಧ್ಯಮ ಸಲಹೆಗಾರರು, ಆಪ್ತ ಶಾಖೆಯಲ್ಲಿನ ಹುದ್ದೆಗಳು ಖಾಯಂ ಹುದ್ದೆಗಳಾಗಿರುವುದಿಲ್ಲ ಹಾಗೂ ಈ ಹುದ್ದೆಗಳಿಗೆ ಯಾವುದೇ ನೇರ ನೇಮಕಾತಿ ಇರುವುದಿಲ್ಲ. ಕರ್ನಾಟಕ ಸರ್ಕಾರ (ವ್ಯವಹಾರ ನಿರ್ವಹಣೆ) (ತಿದ್ದುಪಡಿ) ನಿಯಮಗಳು, 2020, ದಿನಾಂಕ: 03-04-2020 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 1 ಎಆರ್‌ಬಿ 2020ರನ್ವಯ ಮಾನ್ಯ ಸಚಿವರುಗಳ ಆಪ್ತ ಶಾಖೆಯಲ್ಲಿನ ಮಂಜೂರಾದ ಹುದ್ದೆಗಳ ಎದುರಿಗೆ ನಿವೃತ್ತ ಸರ್ಕಾರಿ ಅಧಿಕಾರಿ/ನೌಕರರನ್ನು ಗುತ್ತಿಗೆ ಆಧಾರದ ಮೇಲೆ ಮರುನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆಗೆ ಸಚಿವ ಸಂಪುಟದ ಅನುಮೋದನೆಯ ಅಗತ್ಯವಿರುವುದಿಲ್ಲ ಎಂದು ಸೂಚಿಸಿದೆ.<br><br>ಆದ್ದರಿಂದ, ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 15(1)(ಬಿ)(iii)ರನ್ವಯ ಈ ಹುದ್ದೆಗಳಿಗೆ ನಿವೃತ್ತ ಸರ್ಕಾರಿ ನೌಕರರನ್ನು ನೇಮಕ ಮಾಡಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ, ಆರ್ಥಿಕ ಇಲಾಖೆಯು ನೀಡುವ ಷರತ್ತು ಮತ್ತು ನಿಬಂಧನೆಗಳೊಂದಿಗೆ ನೇಮಕ ಮಾಡಲಾಗುತ್ತದೆ. ಈ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ನಿವೃತ್ತ ಸರ್ಕಾರಿ ನೌಕರರು ಸಚಿವರ ಪದಾವಧಿಯವರೆಗೆ ಮಾತ್ರ ಕಾರ್ಯನಿರ್ವಹಿಸಿ, ಪದಾವಧಿಯು ಮುಗಿದ ನಂತರ ಸದರಿ ಹುದ್ದೆಗಳಿಂದ ಅವರನ್ನು ಬಿಡುಗಡೆಗೊಳಿಸಲಾಗುತ್ತದೆ. |

ಸಂಖ್ಯೆ: ಸಿಆಸುಇ 228 ಸೇನೆನಿ 2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ